ಆ) ಮಹಿಳಾ ಫಲಾನುಭವಿಗಳು ಯೋಜನೆಯ ಪ್ರಯೋಜನವನ್ನು ಪಡೆಯಲು ನಿಗದಿ ಪಡಿಸಿರುವ ಆರ್ಥಿಕ ಇತಿಮಿತಿಗಳೇನು; ಆರ್ಥಿಕ ಮಿತಿಯನ್ನು ಹೆಚ್ಚಳ ಮಾಡಿ ಜನಸಾಮಾನ್ಯ ಮಹಿಳೆಯರು ಸೌಲಭ್ಯಗಳನ್ನು ಪಡೆಯಲು ಸರ್ಕಾರ ಅನುಕೂಲ ಮಾಡಿಕೊಡುವುದೇ;

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಹಕಾರ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ರಚನೆಯಾಗಿರುವ ಮಹಿಳಾ ಸ್ವಸಹಾಯ ಗುಂಪುಗಳು ದಿನಾಂಕ: 01.04.2008 ರಿಂದ ಬ್ಯಾಂಕುಗಳ ಮೂಲಕ ಕನಿಷ್ಠ ರೂ.25,000/– ರಿಂದ ರೂ.1.00 ಲಕ್ಷ ಪಡೆದ ಸಾಲಕ್ಕೆ ಶೇ.6 ರ ಬಡ್ಡಿ ಸಹಾಯಧನ ಒದಗಿಸುವ ಅವಕಾಶ ಕಲ್ಪಿಸಲಾಗಿದೆ.

ಇ) ರಾಜ್ಯದಲ್ಲಿ–ಪ್ರಸಕ್ತ ಸಾಲಿನಲ್ಲಿ ವಿಧವಾ ಮತ್ತು ವೃದ್ಧಾಪ್ಯ ವೇತನಗಳನ್ನು ಮಂಜೂರು ಮಾಡಿರುವ ಮಹಿಳೆಯರ ಸಂಖ್ಯೆ ಎಷ್ಟು (ವಿವರ ನೀಡುವುದು)?

ವಿಧವೆಯರಿಗೆ ವಿಧವಾ ವೇತನ ನೀಡುವ ಕಾರ್ಯಕ್ರಮವನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯವು ಅನುಷ್ಠಾನ ಗೊಳಿಸುತ್ತಿದ್ದು, ಪ್ರಸ್ತುತ ಸಾಲಿನಲ್ಲಿ 8,77,440 ವಿಧವೆಯರು ಪ್ರಯೋಜನ ಪಡೆಯುತ್ತಿದ್ದಾರೆ. ಈ ಸೌಲಭ್ಯ ಪಡೆಯಲು ವಿಧವೆಯ ವಯೋಮಿತಿ 18 ವರ್ಷ ಮೇಲ್ಪಟ್ಟಿದ್ದು, ವಾರ್ಷಿಕ ಆದಾಯ ರೂ.6,000/–ಗಳಿಗೆ ಮೀರದಂತಿರಬೇಕು. ಹಾಲಿ ಮಾಸಿಕ ವಿಧವಾ ವೇತನ ರೂ.400/–ರಂತೆ ನೀಡಲಾಗುತ್ತಿದೆ. ವೃದ್ಧಾಪ್ಯ ವೇತನವನ್ನು ಪಡೆಯುತ್ತಿರುವ ಮಹಿಳೆಯರ ಸಂಖ್ಯೆಗೆ ಸಂಬಂಧಿಸಿದಂತೆ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದ್ದು, ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.

ಸಂಖ್ಯೆ: ಮಮಇ:50:ಮಮಅ:2009

(ಪಿ.ಎಂ.ನರೇಂದ್ರಸ್ವಾಮಿ)
ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

340 ಶ್ರೀ ಹ್ಯಾರಿಸ್ ಎನ್. (ಶಾಂತಿನಗರ)
ಮಾನ್ಯ ಕಾರ್ಮಿಕ ಸಚಿವರು

*****

ಅ) ಶಿಕ್ಷಣ ಪಡೆಯದ ಮಹಿಳೆಯರು ಮತ್ತು ಪ್ರಾಪ್ತ ವಯಸ್ಸಿನ ಮಕ್ಕಳಿಗೆ ಅವರಲ್ಲಿರುವ ಕೌಶಲ್ಯ ಅರ್ಹತೆಗಳನ್ನು ಗುರುತಿಸಿ ವಿಶೇಷ ತರಬೇತಿ ಮತ್ತು ಸರ್ಟಿಫಿಕೇಟ್ ನೀಡುವ ಕೇಂದ್ರ ಸರ್ಕಾರದ ಯೋಜನೆಯಡಿಯಲ್ಲಿ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ರಾಜ್ಯದಲ್ಲಿ ಮಹಿಳೆಯರಿಗಾಗಿ ಒಟ್ಟು 23 ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಗಳು ಅಸ್ತಿತ್ವದಲ್ಲಿವೆ. ಅಲ್ಲದೇ, ಎಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಗಳ ವೃತ್ತಿ /

ಘಟಕಗಳಲ್ಲಿನ ಸೀಟುಗಳಲ್ಲಿ 1/3 ಭಾಗದಷ್ಟು ಸೀಟುಗಳನ್ನು ಮಹಿಳೆಯರಿಗಾಗಿಯೇ ಮೀಸಲಿರಿಸಲಾಗಿದೆ.

ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ವಿವಿಧ ತಾಂತ್ರಿಕ ಮತ್ತು ತಾಂತ್ರಿಕೇತರ ವೃತ್ತಿಗಳಲ್ಲಿ ತರಬೇತಿ ನೀಡಲಾಗುತ್ತಿದ್ದು, ಈ ತರಬೇತಿ ಪಡೆಯಲು ಕನಿಷ್ಟ 10ನೇ ತರಗತಿ ಉತ್ತೀರ್ಣರಾಗಿರಬೇಕು. ಕೇಂದ್ರ ಸರ್ಕಾರದ ನೆರವಿನೊಂದಿಗೆ ಅನುಷ್ಠಾನಗೊಳಿಸುತ್ತಿರುವ ಮಾಡ್ಯುಲಾರ್ ಎಂಪ್ಲಾಯಬಲ್ ಸ್ಕಿಲ್ ಕಾರ್ಯಕ್ರಮದಡಿಯಲ್ಲಿ ಮಹಿಳೆಯರಿಗೆ ಹೊಂದುವಂತಹ ಅನೇಕ ವೃತ್ತಿಗಳನ್ನು ಗುರುತಿಸಲಾಗಿದೆ. ಆದರೆ ಸದರಿ ವೃತ್ತಿಗಳಲ್ಲಿ ತರಬೇತಿ ಪಡೆಯಲು ಕನಿಷ್ಟ 5ನೇ ತರಗತಿ ಉತ್ತೀರ್ಣರಾಗಿರುವುದು ಕಡ್ಡಾಯವಾಗಿರುತ್ತದೆ. ಶಿಕ್ಷಣ ಪಡೆಯದ ಮಹಿಳೆಯರು ಮತ್ತು ಪ್ರಾಪ್ತ ವಯಸ್ಸಿನ ಮಕ್ಕಳಿಗೆ ಉದ್ಯೋಗ ಮತ್ತು ತರಬೇತಿ ಇಲಾಖೆಯು ಯಾವುದೇ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿರುವುದಿಲ್ಲ.

ಆದರೆ, ಒಂದು ವೇಳೆ ಈ ರೀತಿಯ ಬೇಡಿಕೆ ಬಂದಲ್ಲಿ ಹದಿನೆಂಟು ವರ್ಷ ಪೂರ್ಣಗೊಳಿಸಿದ ಮಹಿಳೆಯರಿಗೆ ಅವರು ಹೊಂದಿರುವ ಕೌಶಲ್ಯ ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ವೃತ್ತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದಡಿ ವಿಶೇಷ ತರಬೇತಿ ಮತ್ತು ಸರ್ಟಿಫಿಕೇಟ್ ನೀಡುವ ಕಾರ್ಯಕ್ರಮದ ಬಗ್ಗೆ ಪರಿಶೀಲಿಸಲಾಗುವುದು.

ಆ) ಕೇಂದ್ರ ಸರ್ಕಾರದ ಅತ್ಯಂತ ಪರಿಣಾಮಕಾರಿ ಯೋಜನೆಯನ್ನು ಮಹಿಳೆಯರು ಪಡೆದುಕೊಳ್ಳುವಂತೆ ಅನುಕೂಲವಾಗಲು ರಾಜ್ಯ ಸರ್ಕಾರ ಆಸಕ್ತಿವಹಿಸಿ ಕ್ರಿಯಾ ಯೋಜನೆ ರೂಪಿಸಲು ಮುಂದಾಗುವುದೇ?

ಕೇಂದ್ರ ಸರ್ಕಾರದ ಯೋಜನೆಯ ಪ್ರಯೋಜನವನ್ನು ಮಹಿಳೆಯರು ಪಡೆದುಕೊಳ್ಳಲು ಅನುಕೂಲವಾಗುವಂತೆ ಕ್ರಿಯಾಯೋಜನೆಯನ್ನು ರೂಪಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಹಾಗಿದ್ದಲ್ಲಿ, ಕೇಂದ್ರದ ಯೋಜನೆಯನ್ನು ಮಹಿಳೆಯರು ಪರಿಣಾಮಕಾರಿಯಾಗಿ ಪಡೆಯಲು ಅನುಕೂಲವಾಗುವಂತೆ ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)

ಮೇಲ್ಕಂಡ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಕಾಇ 13 ಇಟಿಎ 2009

(ಬಿ.ಎನ್.ಬಚ್ಚೇಗೌಡ)
ಕಾರ್ಮಿಕ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

341 ಶ್ರೀ ವಿಶ್ವನಾಥ್.ಎಸ್.ಆರ್ (ಯಲಹಂಕ)